**<u>ದಿನಾಂಕಃ 08.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ಹೆಚ್ಚುವರಿ ಮೆಡಿಕಲ್ ಬಿಲ್ಲುಗಳನ್ನು **ನಿಪಿ 10(ಎ)** ಎಂದು, ಚಾಲನಾ ಪರವಾನಗಿ, ಆರ್.ಸಿ, ಪಾಲಿಸಿ ಮತ್ತು ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 12 ರಿಂದ 15** ಎಂದು ಗುರುತಿಸಲಾಯಿತು.

1ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.</u>**

ಅಪಘಾತದ ಬಗ್ಗೆ ದೂರನ್ನು ನನ್ನ ತಂದೆ ಮತ್ತು ನನ್ನ ಅಣ್ಣ ನೀಡಿರುತ್ತಾರೆ. ನನ್ನ ಅಣ್ಣ ಅಪಘಾತವನ್ನು ಕಣ್ಣಾರೆ ನೋಡಿಲ್ಲ. ನಾನು ಪೊಲೀಸರಿಗೆ ಹೇಳಿಕೆಯನ್ನು ಆಸ್ಪತ್ರೆಯಲ್ಲಿ ನೀಡಿರುತ್ತೇನೆ. ಅಪಘಾತವಾದ ದಿನಾಂಕದಂದೇ ದೂರು ನೀಡಲು ತೊಂದರೆ ಇರಲಿಲ್ಲ ಎಂದರೆ ಸಾಕ್ಷಿಯು ನನ್ನ ಕುಟುಂಬದವರು ಹಾಸನದಿಂದ ಮರುದಿನ ಬಂದಿದ್ದು, ಆ ದಿನ ದೂರು ನೀಡಿರುತ್ತಾರೆ ಎಂದು ನುಡಿಯುತ್ತಾರೆ. ಆ ದಿನ ನಾನು ದಾಸರಹಳ್ಳಿಯಿಂದ ಮಾದನಾಯಕನಹಳ್ಳಿಗೆ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದೆನು. ಆ ದಿನ ಬೈಕನ್ನು ನಾನೇ ಚಾಲನೆ ಮಾಡುತ್ತಿದ್ದೆ. ನಾನು ಚಾಲನಾ ಪರವಾನಗಿಯನ್ನು ಹೊಂದಿದ್ದೇನೆ. ಸದರಿ ದಾಖಲಾತಿಯನ್ನು ಹಾಜರುಪಡಿಸಿರುತ್ತೇನೆ. ಆ ದಿನ ನಾನು ಹೋಗುತ್ತಿದ್ದ ಬೈಕು ನನಗೆ ಸೇರಿರುತ್ತದೆ. ಆ ದಿನ ಹಿಂಬದಿ ಸವಾರ ಮತ್ತು ನಾನು ಹೆಲ್ಮೆಟ್ ಧರಿಸಿದ್ದೆವು. ಅಪಘಾತವಾದ ಸ್ಥಳದಲ್ಲಿ ವಾಹನದ ದಟ್ಟಣೆ ಹೆಚ್ಚಾಗಿ ಇತ್ತು ಎಂದರೆ ಸಾಕ್ಷಿಯು ಅಷ್ಟಾಗಿ ಇರಲಿಲ್ಲ ಎಂದು ನುಡಿಯುತ್ತಾರೆ. ನಾನು ಬೈಕನ್ನು 30-40 ಕಿ.ಮಿ ವೇಗದಲ್ಲಿ ಬೈಕನ್ನು ಚಾಲನೆ

ಮಾಡುತ್ತಿದ್ದೆನು. ಆಪಾದಿತ ಲಾರಿ ನಾನು ಹೋಗುತ್ತಿದ್ದ ರಸ್ತೆಯ ಬಲಭಾಗದಿಂದ ಬಂದು ನನಗೆ ಡಿಕ್ಕಿಪಡಿಸಿರುತ್ತೆದೆ. ನಾನು ಲಾರಿಯನ್ನು ಹಿಂದಿಕ್ಕುವ ಭರದಲ್ಲಿ ಇದ್ದೆನು ಎಂದರೆ ಸರಿಯಲ್ಲ. ನನ್ನ ವಾಹನದ ಬಲಭಾಗದ ಪೆಟ್ರೋಲ್ ಟ್ಯಾಂಕ್ ಮತ್ತು ಇಂಜಿನ್ ಗೆ ಜಖಂ ಆಗಿರುತ್ತದೆ. ಆಪಾದಿತ ಲಾರಿ ಎಷ್ಟು ವೇಗದಲ್ಲಿ ಇತ್ತು ಎಂದು ಹೇಳಲು ಆಗುವುದಿಲ್ಲ, ಆದರೆ ಲಾರಿಯು ಅಜಾಗರೂಕತೆಯಿಂದ ತಿರುವು ತೆಗೆದುಕೊಂಡಿರುತ್ತಾರೆ. ನಾನು ನಿಧಾನಗತಿಯಲ್ಲಿ ವಾಹನೆ ಚಾಲನೆ ಮಾಡಿಕೊಂಡು ಹೋಗಿದ್ದಲ್ಲಿ ಅಪಘಾತವಾಗುತ್ತಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಅತೀವೇಗ ಮತ್ತು ಅಜಾಗರೂಕ ಚಾಲನೆಯ ಪರಿಣಾಮ ಅಪಘಾತವಾಗಿದೆ ಎಂದರೆ ಸರಿಯಲ್ಲ. ಲಾರಿ ಚಾಲಕನ ತಪ್ಪಿನಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ನನ್ನನ್ನು ಸ್ಥಳದಲ್ಲಿದ್ದ ಸಾರ್ವಜನಿಕರು ಆ್ಯಂಬುಲೆನ್ಸ್ ಮೂಲಕ ನಾಗಸಂದ್ರದ ಪ್ರಕ್ರಿಯಾ ಆಸ್ಪತ್ರೆಗೆ ಕಳುಹಿಸಿಕೊಟ್ಟಿದ್ದು, ಅಲ್ಲಿ ನಾನು ಪ್ರಥಮ ಚಿಕಿತ್ಸೆ ಪಡೆದು ನಂತರ ಹಾಸನದ ಜನಪ್ರಿಯ ಆಸ್ಪತ್ರೆಗೆ ದಾಖಲಾಗಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ನಾನು 15-17 ದಿನಗಳ ಕಾಲ ಒಳರೋಗಿಯಾಗಿ ದಾಖಲಾಗಿ ಚಿಕಿತ್ಸೆ ಪಡೆದಿರುತ್ತೇನೆ. ಪ್ರಕ್ರಿಯಾ ಆಸ್ಪತ್ರೆಯಲ್ಲಿ ಅಪಘಾತ ಹೇಗೆ ಸಂಭವಿಸಿತು ಎಂದು ತಿಳಿಸಿರುತ್ತೇನೆ. ಸದರಿ ಆಸ್ಪತ್ರೆಯ ಎಂ.ಎಲ್.ಸಿ ವಹಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ. ಜನಪ್ರಿಯ ಆಸ್ಪತ್ರೆಯಲ್ಲಿ ನನಗೆ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ. ಮುಂದುವರೆದ ಚಿಕಿತ್ಸೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಉಂಟಾಗಿದ್ದವು ಎಂದರೆ ಸರಿಯಲ್ಲ. ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾವಗಿವೆ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಪ್ರಮಾಣ ಪತ್ರದ ಖಂಡಿಕೆ 5 ರಲ್ಲಿ ಹೇಳಿರುವಂತಹ

ಯಾವುದೇ ತೊಂದರೆಗಳು ನನಗೆ ಇಲ್ಲ ಎಂದರೆ ಸರಿಯಲ್ಲ. ವೈದ್ಯಕೀಯ ವೆಚ್ಚ ಸಂಪೂರ್ಣವಾಗಿ ಆರೋಗ್ಯ ವಿಮೆಯ ಮೂಲಕ ಮರುಪಾವತಿಯಾಗಿದೆ ಎಂದರೆ ಸಾಕ್ಷಿಯು ರೂ.2,17,000/- ಮರುಪಾವತಿಯಾಗಿದ್ದು, ಉಳಿಕೆ ಮೊತ್ತವನ್ನು ನಾನು ಪಾವತಿಸಿರುತ್ತೇನೆ ಎಂದು ನುಡಿಯುತ್ತಾರೆ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಬಿಡುಗಡೆ ಸಮರಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ.

ಅಪಘಾತವಾದ ಸಮಯದಲ್ಲಿ ನನಗೆ 24 ವರ್ಷ ವಯಸ್ಸು ಆಗಿತ್ತು. ನನ್ನೊಂದಿಗೆ ಬರುತ್ತಿದ್ದವರು ಬಜಾಜ್ ಫೈನಾನ್ಸ್ ಕಂಪನಿಯ ಮ್ಯಾನೇಜರ್ ಆಗಿದ್ದರು. ಅಪಘಾತವಾಗುವ ಮೊದಲು ನಾನು ಖಾಸಗಿ ಕಂಪನಿಯಲ್ಲಿ ಸೇಲ್ಸ್ ಎಕ್ಸಿಕ್ಯೂಟಿವ್ ಆಗಿ ಕೆಲಸ ಮಾಡುತ್ತಿದ್ದೆನು. ಮೇ 2026ರಲ್ಲಿ ನನಗೆ ಸಂಬಳ ಬಂದಿರುವುದಿಲ್ಲ. ಅಪಘಾತವಾದ ನಂತರ ನಾನು ಕೆಲಸಕ್ಕೆ ಹೋಗಿರುವುದಿಲ್ಲ. ನಾನು ಕೆಲಸ ಬಿಟ್ಟ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ನನಗೆ ಸೆಪ್ಟೆಂಬರ್ 2025ರಲ್ಲಿ ಕೊನೆಯ ಬಾರಿಗೆ ಸಂಬಳ ಬಂದಿರುತ್ತದೆ. ಅಪಘಾತವಾದ ನಂತರ ಪಿ.ಎಫ್ ಹಣವನ್ನು ಪಡೆದಿರುತ್ತೇನೆ. ಬಜಾಜ್ ಫೈನಾನ್ಸ್ ಕಂಪನಿಯ ಸಂಬಂಧಪಟ್ಟವರನ್ನು ಕರೆಯಿಸಿ ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ. ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಷ್ಟು ಆದಾಯ ನನಗೆ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಸಂಬಳದ ಹಣವನ್ನು ಖಾತೆಗೆ ಹಾಕುತ್ತಿದ್ದರು. ಆ ಬಗ್ಗೆ ಅಕೌಂಟ್ ಸ್ಟೇಟ್ ಮೆಂಟ್ ಅನ್ನು ಹಾಜರುಪಡಿಸಲು ತೊಂದರೆ ಇಲ್ಲ. ನಾನು ಆದಾಯ ತೆರಿಗೆ ಪಾವತಿದಾರನಲ್ಲ. ಪ್ರಮಾಣ ಪತ್ರದ ಖಂಡಿಕೆ 6 ರಲ್ಲಿ ಹೇಳಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

ಆಪಾದಿತ ವಾಹನದ ಚಾಲಕನ ತಪ್ಪಿ ನಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ನನ್ನ ತಪ್ಪಿ ನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿಸಿಕೊಂಡು ಬಂದು ಹಾಜರುಪಡಿಸಿ, ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**